ಅಸಲು ದಾವಾ ಸಂಖ್ಯೆ 145/2016
ಪಿಡಬ್ಲ್ಯೂ ಃ 1

ದಿನಾಂಕ ಃ 06.10.17 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.
ಮುಖ್ಯ ವಿಚಾರಣೆ ವಾದಿ ಪರ ವಕೀಲರಾದ : ಶ್ರೀ. **ಬಿ ಆರ್ ಡಿ** ರವರಿಂದ

ನಾನು ಈ ಕೇಸಿನ ವಾದಿಯಾಗಿದ್ದು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಸದರಿ ಪ್ರಮಾಣ ಪತ್ರದ ವಿಷಯಗಳನ್ನು ನಾನೇ ಸ್ವತಃ ನನ್ನ ವಕೀಲರಿಗೆ ಹೇಳಿ, ಬರೆಸಿ, ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಎಂದು ಪ್ರಮಾಣೀಕರಿಸುತ್ತೇನೆ.

ದಾವಾ ಆಸ್ತಿಗೆ ಸಂಬಂಧಿಸಿದ ಖರೀದಿ ಪತ್ರದ ದೃಢೀಕೃತ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.1 ಎಂದು ಗುರುತಿಸಲಾಯಿತು. ದಾವಾ ಆಸ್ತಿಗೆ ಸಂಬಂಧಿಸಿದ ವರ್ಗಾವಣೆಯ ಮೂಭಾದಿಲು (ಮ್ಯೂಟೇಷನ್ ಪ್ರತಿ) ಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.2 ಎಂದು ಗುರುತಿಸಲಾಯಿತು. ದಾವಾ ಆಸ್ತಿಗೆ ಸಂಬಂಧಿಸಿದ ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಃ ಕೋರಿಕೆಯ ಮೇರೆಗೆ ಕಾಲಾವಕಾಶ ನೀಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)
ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿ

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ
ಗುಬ್ಬಿ